ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ: ಕೆ3/ NTSE-NMMS ಪ/ಅರ್ಜಿ/ಅನು/46/2020–21 ದಿನಾಂಕ: 05.01.2021

## ಜ್ಞಾಪನ

ವಿಷಯ: NTS-NMMS ಪರೀಕ್ಷೆಗಳ ಪ್ರವೇಶ ಪತ್ರಗಳನ್ನು (Admission Ticket) Download ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿತರಿಸುವ ಬಗ್ಗೆ.

ಉಲ್ಲೇಖ:1.ಈ ಕಛೇರಿ ಸುತ್ತೋಲೆ ಸಮಸಂಖ್ಯೆ, ದಿನಾಂಕ:9.11.2020.

2.ಈ ಕಛೇರಿಯ ಪತ್ರ ಸಂಖ್ಯೆ: ಕೆ3/ NTSE-NMMS ಪರೀಕ್ಷೆ ಅನುಮತಿ/40/2020–21 ದಿನಾಂಕ:31–12–2020

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2020–21ನೇ ಸಾಲಿನ NTS-NMMS ಪರೀಕ್ಷೆಗಳನ್ನು ದಿನಾಂಕ:25.01.2021 ರಂದು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗಳಿಗೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲಾಗಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರ (Admission Ticket) ಗಳನ್ನು ಶಾಲಾ Login ನಲ್ಲಿ ದಿನಾಂಕ:06.01.2021 ರಿಂದ Download ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

- ವಿದ್ಯಾರ್ಥಿಗಳ ಪ್ರವೇಶ ಪತ್ರಗಳು ಶಾಲಾ ಲಾಗಿನ್‌ನಲ್ಲಿ ದಿನಾಂಕ:06.01.2021 ರಿಂದ ದೊರೆಯುತ್ತವೆ. ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಪ್ರವೇಶ ಪತ್ರಗಳನ್ನು (Admission Ticket) ದಿನಾಂಕ:16.01.2021 ರೊಳಗಾಗಿ Download ಮಾಡಿಕೊಂಡು ನಿಗದಿ ಪಡಿಸಿದ ಸ್ಥಳದಲ್ಲಿ ಸಹಿ ಮತ್ತು ಮೊಹರನ್ನು ಹಾಕಿ ವಿದ್ಯಾರ್ಥಿಗಳಿಗೆ ವಿತರಿಸುವುದು.
- ಪ್ರವೇಶ ಪತ್ರದಲ್ಲಿ ವಿದ್ಯಾರ್ಥಿಯು ಪರೀಕ್ಷೆ ಬರೆಯುವ ಪರೀಕ್ಷಾ ಕೇಂದ್ರದ ವಿವರ, ಪರೀಕ್ಷೆಯ ಹೆಸರು, ವೇಳಾಪಟ್ಟಿ ಮತ್ತು ವಿದ್ಯಾರ್ಥಿಯ ವಿವರಗಳು ಪೂರ್ವ ಮುದ್ರಿತವಾಗಿರುತ್ತವೆ. ಸದರಿ ಮಾಹಿತಿಗಳನ್ನು ಪರಿಶೀಲಿಸಿಕೊಂಡು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ವಿತರಿಸುವುದು.
- ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ನಿಗದಿಪಡಿಸಿರುವ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ಹಾಗೂ ಸೂಕ್ತ ಮಾರ್ಗದರ್ಶನವನ್ನು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ನೀಡುವುದು.
- ವಿದ್ಯಾರ್ಥಿಯ ಭಾವಚಿತ್ರ ಪೂರ್ವಮುದ್ರಿತವಾಗಿರುತ್ತದೆ. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವಾಗ ಯಾವ ಭಾವಚಿತ್ರವನ್ನು Upload ಮಾಡಿರುತ್ತಾರೊ ಅದೇ ಭಾವಚಿತ್ರ ಮುದ್ರಿತವಾಗಿರುತ್ತದೆ.
- ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಪ್ರವೇಶ ಪತ್ರವನ್ನು ತರುವುದು ಕಡ್ಡಾಯವಾಗಿರುವುದರಿಂದ ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು /ಪ್ರಾಂಶುಪಾಲರು ಪರೀಕ್ಷೆ ತೆಗೆದುಕೊಂಡಿರುವ ಎಲ್ಲಾ ವಿದ್ಯಾರ್ಥಿಗಳಿಗೂ ಪ್ರವೇಶ ಪತ್ರಗಳನ್ನು ತಪ್ಪದೇ ಸಕಾಲದಲ್ಲಿ ವಿತರಿಸುವುದು.
- ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವಾಗ ನೀಡಿರುವ/ಭರ್ತಿಮಾಡಿರುವ ಮಾಹಿತಿಗಳು ಪ್ರವೇಶ ಪತ್ರದಲ್ಲಿ ಪೂರ್ವ ಮುದ್ರಿತವಾಗಿರುತ್ತದೆ. ಆದಕಾರಣ ಪ್ರವೇಶ ಪತ್ರದಲ್ಲಿ ಯಾವುದೇ ಮಾಹಿತಿಗಳ ಬದಲಾವಣೆ/ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ ಹಾಗೂ ತಿದ್ದುಪಡಿ ಸಂಬಂಧ ಮಂಡಳಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸುವಂತಿಲ್ಲ.

**ವಿ.ಸೂ:** ಕೋವಿಡ್–19 ರ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಗೆ ಸಂಬಂಧಿಸಿದಂತೆ ಸೂಕ್ತ ಮಾರ್ಗದರ್ಶನದ ಅವಶ್ಯಕತೆಯಿದೆ. ಈಗಾಗಲೇ ಉಲ್ಲೇಖ–2 ರಂತೆ ನೀಡಿರುವ SOP ಯಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಹಾಗೂ ಈ ಬಗ್ಗೆ ಸೂಕ್ತ ತಿಳುವಳಿಕೆ/ಜಾಗೃತಿಯನ್ನು ವಿದ್ಯಾರ್ಥಿಗಳಿಗೆ ನೀಡುವುದು. ಮುಂದುವರೆದು ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರಗಳನ್ನು ವಿತರಿಸುವ ಸಂದರ್ಭದಲ್ಲಿ ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳಿಗೆ ಮಾಸ್ಕ್‌ಅನ್ನು ಕಡ್ಡಾಯವಾಗಿ ಧರಿಸಿಕೊಂಡು ಪರೀಕ್ಷೆಗೆ ಹಾಜರಾಗುವಂತೆ, ಕುಡಿಯಲು ಮನೆಯಿಂದಲೇ ತಮ್ಮದೇ ನೀರಿನ ಬಾಟಲ್ ತೆಗೆದುಕೊಂಡು ಹೋಗಲು ಹಾಗೂ ಪರೀಕ್ಷಾ ಸಂದರ್ಭದಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವಂತೆ ಮಾರ್ಗದರ್ಶನವನ್ನು ನೀಡುವುದು.

ಈ ಮೇಲಿನ ಎಲ್ಲಾ ಅಂಶಗಳನ್ನು ಗಮನಿಸಿ ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರಗಳನ್ನು ವಿತರಿಸುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ತಿಳಿಸಿದೆ.

6/1/21

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2. NTS-NMMS ಪರೀಕ್ಷೆಗಳ ನೋಡಲ್ ಅಧಿಕಾರಿಗಳಿಗೆ.
3. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.